# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 970 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22.02.2024 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ವ್ಯಾಪ್ತಿಗೆ ಬರುವ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಇಲಾಖೆಗೆ ಬರುವ ಸ್ಮಾರಕಗಳು ಎಷ್ಟು; ಅವು ಯಾವುವು; (ಜಿಲ್ಲಾವಾರು ವಿವರ ನೀಡುವುದು) | ಪ್ರವಾಸೋದ್ಯಮ ಇಲಾಖೆಯಿಂದ ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿನ ಕಲಬುರಗಿ, ಬೀದರ್, ಕೊಪ್ಪಳ, ರಾಯಚೂರು, ಯಾದಗಿರಿ, ಬಳ್ಳಾರಿ ಜಿಲ್ಲೆಗಳ ಒಟ್ಟಾರೆ 249 ರಾಜ್ಯ ಸಂರಕ್ಷಿತ ಸ್ಮಾರಕಗಳಿದ್ದು, ಇವುಗಳ ಜಿಲ್ಲಾವಾರು ಪಟ್ಟಿಯನ್ನು **ಅನುಬಂಧ-1** ರಲ್ಲಿ ಒದಗಿಸಿದೆ. |
| ಆ) | ಈ ಸ್ಮಾರಕಗಳ ಮತ್ತು ಇಲ್ಲಿನ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಕಳೆದ 3 ವರ್ಷಗಳಲ್ಲಿ ಇವುಗಳ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನ ಎಷ್ಟು; | ಕಲ್ಯಾಣ ಕರ್ನಾಟಕ ವ್ಯಾಪ್ತಿಗೆ ಬರುವ ಸ್ಮಾರಕಗಳ ಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಕಳೆದ 3 ವರ್ಷಗಳಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳಿಗೆ ಪ್ರವಾಸೋದ್ಯಮ ಇಲಾಖೆಯಿಂದ ಬಿಡುಗಡೆ ಮಾಡಿರುವ ಅನುದಾನದ ವಿವರವನ್ನು **ಅನುಬಂಧ-2**ರಲ್ಲಿ ಮತ್ತು ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ವತಿಯಿಂದ ಬಿಡುಗಡೆ ಮಾಡಿರುವ ಅನುದಾನದ ವಿವರವನ್ನು **ಅನುಬಂಧ-3 ರಲ್ಲಿ** ಒದಗಿಸಿದೆ. |
| ಇ) | ಈ ಭಾಗದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಸರ್ಕಾರ ಕೈಗೊಂಡ ಪ್ರಮುಖ ಯೋಜನೆಗಳು ಯಾವುವು; ಕೈಗೊಂಡ ಯೋಜನೆಗಳ ವಿಸ್ತೃತ ಯೋಜನಾ ವರದಿಗಳ ಕುರಿತು ಮಾಹಿತಿಯನ್ನು ನೀಡುವುದು? | ಈ ಭಾಗದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಇಲಾಖೆಯಿಂದ ಕೈಗೊಂಡ ಪ್ರಮುಖ ಯೋಜನೆಗಳ ವಿವರ ಕೆಳಕಂಡಂತಿದೆ:<br><br>**1) <u>ಪ್ರವಾಸೋದ್ಯಮ ನಿರ್ದೇಶನಾಲಯ:</u>**<br><br>ರಾಜ್ಯದ ಪ್ರವಾಸೋದ್ಯಮ ಆಕರ್ಷಣೆಗೆ ಕರ್ನಾಟಕ ಪ್ರವಾಸೋದ್ಯಮ ನೀತಿ 2020-26 ರಡಿ ಕಲ್ಯಾಣ ಕರ್ನಾಟಕ ವ್ಯಾಪ್ತಿಗೆ ಬರುವ ಜಿಲ್ಲೆಗಳಲ್ಲಿ ಗುರುತಿಸಿರುವ ಆದ್ಯತಾ ಪ್ರವಾಸಿ ತಾಣಗಳಲ್ಲಿ ಈ ಕೆಳಕಂಡ 26 ಪ್ರವಾಸಿ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲು ಮುಂದೆ ಬರುವ ಖಾಸಗೀ ಬಂಡವಾಳ ಹೂಡಿಕೆದಾರರನ್ನು ಸೆಳೆಯಲು ಸಹಾಯಧನ, ಪ್ರೋತ್ಸಾಹಕಗಳು ಮತ್ತು ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>1. ಸಾಹಸ ಪ್ರವಾಸೋದ್ಯಮ<br>2. ಕೃಷಿ ಪ್ರವಾಸೋದ್ಯಮ<br>3. ಅಮ್ಯೂಸ್‌ಮೆಂಟ್ ಪಾರ್ಕ್<br>4. ಕಾರವಾನ್ ಪಾರ್ಕ್<br>5. ಕಾರವಾನ್ ಪ್ರವಾಸೋದ್ಯಮ |

6. ಸಮಾವೇಶ ಕೇಂದ್ರ
7. ಸಾಂಸ್ಕೃತಿಕ ಪ್ರವಾಸೋದ್ಯಮ ಯೋಜನೆ
8. ಸಾಂಸ್ಕೃತಿಕ ಗ್ರಾಮ
9. ಪರಿಸರ ಪ್ರವಾಸೋದ್ಯಮ ಯೋಜನೆ.
10. ಪಾರಂಪರಿಕ ಹೋಟೆಲ್ ಯೋಜನೆ
11. ಪಾರಂಪರಿಕ ಪ್ರವಾಸೋದ್ಯಮ ಯೋಜನೆ
12. ಹೆರಿಟೇಜ್ ವಾಕ್
13. ಹೋಂ-ಸ್ಟೇ
14. ಹೋಟೆಲ್ ಯೋಜನೆ-ಬಜೆಟ್
15. ಹೋಟೆಲ್ ಯೋಜನೆ-ಪ್ರೀಮಿಯಂ
16. ಹೌಸ್ ಬೋಟ್ ಯೋಜನೆ
17. ಮ್ಯೂಸಿಯಮ್ ಮತ್ತುಗ್ಯಾಲರಿ
18. ರೋಪ್ –ವೇ
19. ಧ್ವನಿ ಮತ್ತು ಬೆಳಕು
20. ಸುರಕ್ಷತೆ ಮತ್ತು ಸ್ವಾಸ್ಥ್ಯ ಯೋಜನೆ
21. ಟೆಂಟ್ ವಸತಿ ವ್ಯವಸ್ಥೆ
22. ಥೀಮ್ ಪಾರ್ಕ್
23. ಪ್ರವಾಸಿ ವ್ಯಾಖ್ಯಾನ ಕೇಂದ್ರ
24. ಪ್ರವಾಸಿ ಐಷಾರಾಮಿ ಕೋಚ್
25. ಸ್ವಾಸ್ಥ್ಯ ಕೇಂದ್ರ
26. ರಸ್ತೆ ಬದಿ ಸೌಲಭ್ಯ

ಇದ್ದಲ್ಲದೇ, ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಬರುವ ಜಿಲ್ಲೆಗಳಲ್ಲಿನ ಆದ್ಯತಾ ಪ್ರವಾಸಿ ತಾಣಗಳಲ್ಲಿ ಕೈಗೆತ್ತಿಕೊಂಡಿರುವ ಹೋಟೆಲ್ ಯೋಜನೆ-ಪ್ರೀಮಿಯಂ ಯೋಜನೆಗಳಿಗೆ ಅರ್ಹ ಯೋಜನಾ (ಇ.ಪಿ.ಸಿ) ಮೊತ್ತಕ್ಕೆ ಶೇ.5% ರಷ್ಟು ಹೆಚ್ಚುವರಿ ಸಹಾಯಧನ ನೀಡಲಾಗುತ್ತದೆ.

- ಕಲ್ಯಾಣ ಕರ್ನಾಟಕ ಒಳಗೊಂಡಂತೆ ರಾಜ್ಯದ ಪ್ರವಾಸಿ ತಾಣಗಳಲ್ಲಿ ಅಗತ್ಯವಾಗಿರುವ ಪ್ರವಾಸಿ ಸೌಲಭ್ಯಗಳಾದ ವಸತಿ ಕಟ್ಟಡಗಳು, ಕುಡಿಯುವ ನೀರಿನ ಸೌಲಭ್ಯ, ಶೌಚಾಲಯಗಳು, ಸ್ನಾನಗೃಹಗಳು, ಪಾರ್ಕಿಂಗ್ ವ್ಯವಸ್ಥೆ, ಪ್ರವಾಸಿ ಸೂಚನಾ ಫಲಕಗಳು, ಆಸನಗಳ ವ್ಯವಸ್ಥೆ, ಮೆಟ್ಟಿಲುಗಳು ಮತ್ತು ರೈಲಿಂಗ್ಸ್, ಪರಗೋಲ, ಪಾತ್ ವೇ, ಪ್ರವಾಸಿ ತಾಣಗಳಲ್ಲಿ ಅಂತಿಮ ಹಂತದ ಕೂಡು ರಸ್ತೆ ಅಭಿವೃದ್ಧಿ ಮುಂತಾದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತದೆ.
- ಕಲ್ಯಾಣ ಕರ್ನಾಟಕ ಒಳಗೊಂಡಂತೆ ಪ್ರವಾಸಿ ತಾಣಗಳ ಬಳಿ ಬರುವ ಪ್ರವಾಸಿಗರಿಗೆ ಆತಿಥ್ಯ ಸೇವೆಯನ್ನು ಒದಗಿಸಲು ಮುಂದೆ ಬರುವ ಮನೆ ಮಾಲೀಕರುಗಳಿಗೆ "ಹೋಂ-ಸ್ಟೇ" ಯೋಜನೆಯಡಿ ನೋಂದಣಿ ಮಾಡಲಾಗುವುದು.
- ಕಲ್ಯಾಣ ಕರ್ನಾಟಕದ ವ್ಯಾಪ್ತಿಯಲ್ಲಿ ಬರುವ ಪ್ರಮುಖ ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರಿಗೆ ಪ್ರವಾಸಿ ತಾಣಗಳ ಬಗ್ಗೆ ಮಾಹಿತಿಯನ್ನು ಒದಗಿಸಲು ಇಲಾಖೆಯಿಂದ ತರಬೇತಿ ನೀಡಿರುವ ಪ್ರವಾಸಿ ಮಾರ್ಗದರ್ಶಿಗಳ ನೋಂದಣಿ ಮಾಡಿ ಪರವಾನಗಿ ನೀಡಲಾಗುವುದು.

.....3

- ಕಲ್ಯಾಣ ಕರ್ನಾಟಕದ ವ್ಯಾಪ್ತಿಯಲ್ಲಿ ಬರುವ ಪ್ರಮುಖ ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರ ಸುರಕ್ಷತೆ ಹಾಗೂ ಭದ್ರತೆ ದೃಷ್ಟಿಯಿಂದ ಪ್ರವಾಸಿ ತಾಣಗಳಲ್ಲಿ ಗೃಹರಕ್ಷಕ ದಳದ ಸಿಬ್ಬಂದಿಗಳಿಗೆ ತರಬೇತಿ ನೀಡಿ, "ಪ್ರವಾಸಿ ಮಿತ್ರ" ಸಿಬ್ಬಂದಿಗಳನ್ನು ನೇಮಿಸಲಾಗಿದೆ.
- ಕಲ್ಯಾಣ ಕರ್ನಾಟಕ ಒಳಗೊಂಡಂತೆ ರಾಜ್ಯದ ಪ್ರವಾಸಿ ತಾಣಗಳನ್ನು ಪ್ರಚಾರ ಪಡಿಸಲು ರಾಷ್ಟ್ರ ಮಟ್ಟದಲ್ಲಿ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ಮೇಳ ಹಾಗೂ ರೋಡ್ ಶೋಗಳಲ್ಲಿ ಭಾಗವಹಿಸುವುದು.
- ಕಲ್ಯಾಣ ಕರ್ನಾಟಕ ಒಳಗೊಂಡಂತೆ ರಾಜ್ಯ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ಹಾಗೂ ಪ್ರಮುಖ ಪ್ರವಾಸಿ ತಾಣಗಳಲ್ಲಿ ನಡೆಯುವ ಹಬ್ಬ ಹಾಗೂ ಉತ್ಸವಗಳಿಗೆ ಇಲಾಖೆಯ ಅನುದಾನ ಒದಗಿಸುವುದು ಹಾಗೂ ಸದರಿ ಹಬ್ಬ ಹಾಗೂ ಉತ್ಸವಗಳಲ್ಲಿ ಇಲಾಖೆಯ ಪರವಾಗಿ ಮಳಿಗೆ ತೆರೆದು ರಾಜ್ಯದ ಪ್ರವಾಸಿ ತಾಣಗಳನ್ನು ವ್ಯಾಪಕವಾಗಿ ಪ್ರಚಾರ ಮಾಡಲಾಗುವುದು.
- ಕಲ್ಯಾಣ ಕರ್ನಾಟಕ ಒಳಗೊಂಡಂತೆ ರಾಜ್ಯ ಪ್ರವಾಸಿ ತಾಣಗಳ ಬಗ್ಗೆ ಒಳಾಂಗಣ ಹಾಗೂ ಹೊರಾಂಗಣ ಪ್ರಚಾರವನ್ನು ವಿಮಾನ ನಿಲ್ದಾಣ, ಬಸ್ ನಿಲ್ದಾಣ, ರೈಲು ನಿಲ್ದಾಣ ಹಾಗೂ ಇತರೆ ಆಯ್ದ ಸ್ಥಳಗಳಲ್ಲಿ ಕೈಗೊಳ್ಳುವುದು.

**2)<u>ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ:</u>**

- ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯು ಸ್ಮಾರಕ ದತ್ತು (Adopt A Monument) ಯೋಜನೆ ಜಾರಿಗೊಳಿಸಿದ್ದು, ಸ್ಮಾರಕವನ್ನು ದತ್ತು ತೆಗೆದುಕೊಳ್ಳುವ ಬಗ್ಗೆ ಖಾಸಗಿ ಉದ್ಯಮಿಗಳು, ಕೈಗಾರಿಕೋದ್ಯಮಿಗಳು ಮತ್ತು ಸಂಘ ಸಂಸ್ಥೆಗಳಿಗೆ ಸ್ಮಾರಕವನ್ನು ದತ್ತು ತೆಗೆದುಕೊಂಡು ಕರ್ನಾಟಕ ರಾಜ್ಯದ ಕಲೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ಇಲಾಖೆಯ ಜೊತೆ ಕೈ ಜೋಡಿಸುವಂತೆ ಮನವಿ ಮಾಡಿಕೊಳ್ಳುವ ಸಲುವಾಗಿ "ನಮ್ಮ ಸ್ಮಾರಕ ದರ್ಶನ ಮತ್ತು ಸಂರಕ್ಷಣೆಗಾಗಿ" ಪ್ರವಾಸವನ್ನು ಹಮ್ಮಿ ಕೊಂಡಿದ್ದು, ಮೊದಲನೆ ಮತ್ತು ಎರಡನೇ ಹಂತದಲ್ಲಿ ಕಲ್ಯಾಣ ಕರ್ನಾಟಕದ 07 ಜಿಲ್ಲೆಗಳಲ್ಲಿ ಬೀದರ್, ಕಲಬುರುಗಿ, ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರವಾಸವನ್ನು ಹಮ್ಮಿಕೊಳ್ಳಲಾಗಿರುತ್ತದೆ.
- ಕಲಬುರುಗಿ ಜಿಲ್ಲೆ, ಚಿತ್ತಾಪುರ ತಾಲ್ಲೂಕಿನ ನಾಗಾವಿಯಲ್ಲಿರುವ ರಾಷ್ಟ್ರಕೂಟರ ಕಾಲದಲ್ಲಿ ನಿರ್ಮಿಸಿರುವ ಕರ್ನಾಟಕದ ಮೊದಲ ಪ್ರಾಚೀನ ವಿಶ್ವವಿದ್ಯಾನಿಲಯವಾಗಿದ್ದು ಹಾಗೂ ಚಾಲುಕ್ಯರ ಒಂದನೇ ಸೋಮೇಶ್ವರನ ಕಾಲಕ್ಕೆ ಸೇರಿದ 60 ಕಂಬದ ಘಟಿಕೋತ್ಸವ ಸೇರಿದಂತೆ ಇವುಗಳ ಸ್ಮಾರಕಗಳ ಸಮುಚ್ಚಯವನ್ನು ಸಂರಕ್ಷಣೆ ಮಾಡಲು ಕ್ರಮವಹಿಸಲಾಗುತ್ತಿದೆ ಮತ್ತು ಇವುಗಳ ಅಧ್ಯಯನಕ್ಕೆ ತಜ್ಞರ ಸಮಿತಿಯನ್ನು ರಚಿಸಲಾಗಿದೆ.